## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮಾನವಿ.

C.C. No.645/2019

CW-6
PW-4

| | | |
|---|---|---|
| ಸಾಕ್ಷಿದಾರರ ಹೆಸರು | : | ವೆಂಕಟೇಶ |
| ತಂದೆಯ ಹೆಸರು | : | ಬೋಜಣ್ಣ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಮೆಕಾನಿಕ್ |
| ವಾಸ ಸ್ಥಳ | : | ಸುಂಕೇಶ್ವರ |

ದಿನಾಂಕ 26.07.2023 ರಂದು ಸತ್ಯ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು.

## ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ

ಚಾಸಾ-5 ನನ್ನ ಹೆಂಡತಿ. ಚಾಸಾ-1, 7 ರಿಂದ 19 ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿ ಗೊತ್ತಿಲ್ಲ. 2019 ನೇ ಸಾಲಿನಲ್ಲಿ ನಾನು ಮತ್ತು ನನ್ನ ಹೆಂಡತಿ ಚಾಸಾ-5 ಕೂಡಿಕೊಂಡು ಸರಕಾರಿ ಬಸ್ಸನಲ್ಲಿ ಮಾನ್ವಿಯಿಂದ ರಾಯಚೂರಗೆ ಹೋಗುತ್ತಿರುವಾಗ ಮಧ್ಯಾಹ್ನ 12 ಗಂಟೆ ಸುಮಾರಿಗೆ ಕಪಗಲ್ ಕ್ರಾಸ ಹತ್ತಿರ ನಾವು ಹೋಗುತ್ತಿರುವ ಬಸ್ ಮತ್ತು ಇನ್ನೋವ ಕಾರಿನ ಮಧ್ಯೆ ಅಪಘಾತವಾಗಿರುತ್ತದೆ. ಅದರಿಂದ ಚಾಸಾ-5 ರ ತಲೆಗೆ ಗಾಯವಾಗಿರುತ್ತದೆ. ನನ್ನ ಮೈ ಕೈಗೆ ಮೂಕಪೆಟ್ಟು ಆಗಿದ್ದವು. ಗಾಯಗೊಂಡ ನಮ್ಮನ್ನು ಮಾನ್ವಿ ಸರಕಾರಿ ಆಸ್ಪತ್ರೆಗೆ ಅಂಬುಲೆನ್ಸ ಮುಖಾಂತರ ಸಾಗಿಸಿರುತ್ತಾರೆ. ಹೆಚ್ಚಿನ ಚಿಕಿತ್ಸೆ ಸಲುವಾಗಿ ರಾಯಚೂರಿನ ರಿಮ್ಸ ಆಸ್ಪತ್ರೆಗೆ ಕಳುಹಿಸಿರುತ್ತಾರೆ. ಅಪಘಾತ ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಆ ಬಗ್ಗೆ ಪೋಲಿಸರಿಗೆ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಗಣಿಸಬೇಕೆಂದು ಕೋರಿರುತ್ತಾರೆ. ಅಂತೆಯೇ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

## ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ

ಆ ದಿನ ಈ ನ್ಯಾಯಾಲಯದ ಮುಂದಿರುವ ಆರೋಪಿ ನಾವು

ಹೋಗುತ್ತಿರುವ ಬಸ್ಸಿಗೆ ಚಾಲಕ ಇದ್ದ ಅಂದರೆ ನನಗೆ ಗೊತ್ತಿಲ್ಲ. ಆರೋಪಿ ತನ್ನ ಬಸ್ಸನ್ನು ವೇಗವಾಗಿ ಮತ್ತು ಅಲಕ್ಷತನದಿಂದ ಚಲಾಯಿಸಿ ರಸ್ತೆಯ ಬಲಬಾಜು ರಾಂಗ್ ಸೈಡ ನಲ್ಲಿ ಚಲಾಯಿಸಿ ಎದುರಿನಿಂದ ಬರುತ್ತಿರುವ ಒಂದು ಇನ್ನೊವ ಕಾರಿಗೆ ಡಿಕ್ಕಿಪಡಿಸಿರುತ್ತದೆ ಅಂದರೆ ಸರಿಯಲ್ಲ. ಅಪಘಾತವು ಆರೋಪಿತನ ನಿರ್ಲಕ್ಷತನದ ಚಾಲನೆಯಿಂದ ಆಗಿದ್ದರು. ಈಗ ಓದಿ ಹೇಳಿದಂತೆ ದಿನಾಂಕ 12.07.2019 ರಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ನಾನು ನಿಪಿ-5 ರಂತೆ ಹೇಳಿಕೆ ನೀಡಿದ್ದರು ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವಿ ಪಿ ವಕೀಲರಿಂದಃ**

ದಿನಾಂಕ 11.07.2019 ರಂದು ನಾನು ಮತ್ತು ನನ್ನ ಹೆಂಡತಿ ಚಾಸಾ-5 ಸರಕಾರಿ ಬಸ್ ನಲ್ಲಿ ರಾಯಚೂರುಗೆ ಹೋಗುತ್ತಿರುವಾಗ ಕಪಗಲ್ ಕ್ರಾಸ ಹತ್ತಿರ ಅಪಘಾತವಾಗಿರುತ್ತದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಅದರಿಂದ ನನಗೆ ಮತ್ತು ನನ್ನ ಹೆಂಡತಿಗೆ ಗಾಯಗಳಾಗಿರುತ್ತವೆ ನಮ್ಮನ್ನು ಆಸ್ಪತ್ರೆಗೆ ತೆಗೆದುಕೊಂಡು ಹೋಗಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿರುತ್ತದೆ)

ಓ.ಹೇ.ಕೇ. ಸರಿ ಇದೆ.

**ಪ್ರ.ದ.ನ್ಯಾ.ದಂ. ಮಾನ್ವಿ**